# ಪತ್ರಿಕಾ ತುಣುಕುಗಳು
# PAPER CLIPPINGS

4

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 7/11/20

# ವಿಷ ಪಟಾಕಿ ನಿಷಿದ್ಧ, ಹಸಿರು ಪಟಾಕಿ ಓಕೆ

## ದೀಪಾವಳಿ ಹಬ್ಬಕ್ಕೆ ಪಟಾಕಿ ಸಂಪೂರ್ಣ ನಿಷೇಧ ಇಲ್ಲ
## ಕೊರೋನಾ ಹಿನ್ನೆಲೆ: ಮಾಲಿನ್ಯರಹಿತ ಪಟಾಕಿ ಬಳಸಿ ಜನತೆಗೆ ಸಿಎಂ ಮನವಿ | ಇಂದು ಮಾರ್ಗಸೂಚಿ ನಿರೀಕ್ಷೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೋವಿಡ್ ಹಿನ್ನೆಲೆಯಲ್ಲಿ ಈ ಬಾರಿಯ ದೀಪಾವಳಿ ಹಬ್ಬದಲ್ಲಿ ಹೆಚ್ಚು ವಾಯುಮಾಲಿನ್ಯ ಉಂಟುಮಾಡದ ಹಸಿರು ಪಟಾಕಿಯನ್ನು ಮಾತ್ರ ಬಳಸುವಂತೆ ರಾಜ್ಯ ಸರ್ಕಾರ ನಿರ್ಧಾರ ಕೈಗೊಂಡು ಪ್ರಕಟಣೆ ಹೊರಡಿಸಿದೆ. ಈ ಸಂಬಂಧ ಮಾರ್ಗಸೂಚಿಗಳನ್ನು ಒಳಗೊಂಡ ವಿವರವಾದ ಅಧಿಕೃತ ಆದೇಶ ಶನಿವಾರ ಹೊರಬೀಳುವ ಸಾಧ್ಯತೆಯಿದೆ.

'ಕೊರೋನಾ ಸೋಂಕನ್ನು ನಿಯಂತ್ರಿಸುವ ಉದ್ದೇಶದಿಂದ ಸಾರ್ವಜನಿಕರ ಮತ್ತು ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ದೀಪಾವಳಿ ಹಬ್ಬವನ್ನು ಸರಳವಾಗಿ, ಅರ್ಥಗರ್ಭಿತವಾಗಿ ಹಾಗೂ ಭಕ್ತಿಪೂರ್ವಕವಾಗಿ ಆಚರಿಸುವುದು ಸೂಕ್ತ. ಈ ಹಿನ್ನೆಲೆಯಲ್ಲಿ ಹಸಿರು ಪಟಾಕಿಯನ್ನು ಮಾತ್ರ ಬಳಸಿ ದೀಪಾವಳಿಯನ್ನು ಸರಳ ಸುಂದರವಾಗಿ ಆಚರಿಸಿ' ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮನವಿ ಮಾಡಿದ್ದಾರೆ.

ವಾಸ್ತವವಾಗಿ ಶುಕ್ರವಾರ ಮಧ್ಯಾಹ್ನ ಸುದ್ದಿಗಾರರೊಂದಿಗೆ ಮಾತನಾಡಿದ್ದ ಯಡಿಯೂರಪ್ಪ ಅವರು, ಕೋವಿಡ್ ಹಿನ್ನೆಲೆಯಲ್ಲಿ ಈ ಬಾರಿ ದೀಪಾವಳಿಯಲ್ಲಿ ಪಟಾಕಿ ಸಿಡಿಸುವುದನ್ನು ನಿಷೇಧಿಸುವ ತೀರ್ಮಾನಕ್ಕೆ ಬಂದಿದೆ. ಈ ಸಂಬಂಧ ಆದೇಶ ಹೊರಡಿಸಲಾಗುವುದು ಎಂದು ತಿಳಿಸಿದ್ದರು. ಆದರೆ, ಸಾರ್ವಜನಿಕ ವಲಯದಲ್ಲಿ ಟೀಕೆ ಟಿಪ್ಪಣಿ ಕೇಳಿ ಬಂದಿದ್ದರಿಂದ ಸಂಜೆ ವೇಳೆ ತಮ್ಮ ನಿಲುವನ್ನು ಬದಲಿಸಿಕೊಂಡ ಅವರು, ಹಸಿರು ಪಟಾಕಿಯನ್ನು ಮಾತ್ರ ಬಳಸಬಹುದು ಎಂದು ಲಿಖಿತ ಹೇಳಿಕೆ ನೀಡಿದರು.

ಪಟಾಕಿಯಿಂದ ಉಂಟಾಗುವ ವಾಯುಮಾಲಿನ್ಯದಿಂದ ಶ್ವಾಸಕೋಶದ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಹೆಚ್ಚು ಹಾನಿ ಉಂಟಾಗುತ್ತದೆ. ಈ ಹಿನ್ನೆಲೆಯಲ್ಲಿ ಪಟಾಕಿ ಸಿಡಿಸುವುದನ್ನು ನಿಷೇಧಿಸುವಂತೆ ತಜ್ಞರು ಸರ್ಕಾರಕ್ಕೆ ಶಿಫಾರಸು ಮಾಡಿದ್ದರು. ಆದರೆ, ಸಾರ್ವಜನಿಕರು ಹಾಗೂ ವಿವಿಧ ಸಂಘಟನೆಗಳಿಂದ ಪಟಾಕಿ ನಿಷೇಧಿಸುವ ಪ್ರಸ್ತಾಪಕ್ಕೆ ವಿರೋಧ ವ್ಯಕ್ತವಾದ್ದರಿಂದ ಸರ್ಕಾರ ಪೂರ್ಣ ಪ್ರಮಾಣದಲ್ಲಿ ಪಟಾಕಿ ನಿಷೇಧಿಸುವ ಬದಲು ಹಸಿರು ಪಟಾಕಿ ಬಳಸುವಂತೆ ಅನುಮತಿ ನೀಡಿದೆ.

**ಇಂದು ರೂಪುರೇಷೆ ಪ್ರಕಟ- ಸುಧಾಕರ್:** ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಮಾತನಾಡಿ, ಈ ವರ್ಷ ಯಾರೂ ಮಾಲಿನ್ಯಯುಕ್ತ ಪಟಾಕಿಗಳನ್ನು ಸಿಡಿಸಬೇಡಿ. ಪಟಾಕಿ ನಿಷೇಧದ ರೂಪುರೇಷೆ ಶನಿವಾರ ಅಂತಿಮವಾಗಲಿದೆ. ಜನರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಕೊರೋನಾ ಸೋಂಕು ತಗಲಿ ಗುಣಮುಖರಾಗಿರುವವರ ಆರೋಗ್ಯದ ದೃಷ್ಟಿಯಿಂದ ಪಟಾಕಿ ಸಿಡಿಸುವುದನ್ನು ನಿಷೇಧಿಸುವುದು ಒಳ್ಳೆಯದು. ಪಟಾಕಿ ಸಿಡಿಸುವುದರಿಂದ ಮಲಿನವಾಗುವ ಗಾಳಿಯನ್ನು ಸೇವಿಸುವುದರಿಂದ ಈಗಾಗಲೇ ಸೋಂಕಿತರಾಗಿದ್ದು, ಶ್ವಾಸಕೋಶ ಸಮಸ್ಯೆಯಿಂದ ಬಳಲುತ್ತಿರುವವರಿಗೆ ತೀವ್ರ ಸಮಸ್ಯೆಯಾಗಲಿದೆ ಎಂಬುದಾಗಿ ಪರಿಣತ ವೈದ್ಯರು ಸಲಹೆ ನೀಡಿದ್ದಾರೆ ಎಂದರು.



## ಏನಿದು ಹಸಿರು ಪಟಾಕಿ?

ಪರಿಸರಕ್ಕೆ ಅಪಾಯಕಾರಿ ಅಲ್ಲದ, ಕಡಿಮೆ ಶಬ್ದ ಹಾಗೂ ವಾಯು ಮಾಲಿನ್ಯ ಉಂಟು ಮಾಡುವ ಪಟಾಕಿಗಳನ್ನು ಹಸಿರು ಪಟಾಕಿ ಎನ್ನುತ್ತಾರೆ. ಇಂತಹ ಪಟಾಕಿಗಳಲ್ಲಿ ಅಪಾಯಕಾರಿ ರಾಸಾಯನಿಕಗಳಾದ ಲೀಥಿಯಂ, ಆರ್ಸೆನಿಕ್, ಬೇರಿಯಂ ಮತ್ತು ಸೀಸದ ಅಂಶಗಳು ಇರತಕ್ಕದ್ದಲ್ಲ. ಸಾಮಾನ್ಯ ಪಟಾಕಿಗಳಿಗೆ ಹೋಲಿಸಿದರೆ ಇವು ಶೇ.30ರಿಂದ ಶೇ.40ರಷ್ಟು ಕಡಿಮೆ ಮಾಲಿನ್ಯ ಉಂಟು ಮಾಡುತ್ತವೆ. 2018ರಲ್ಲಿ ಪಟಾಕಿ ಸಿಡಿತ ಕುರಿತ ಆದೇಶ ನೀಡಿದ್ದ ಸುಪ್ರೀಂಕೋರ್ಟ್, ಹಸಿರು ಪಟಾಕಿಗಳ ಬಳಕೆಗೆ ಸಮ್ಮತಿ ಸೂಚಿಸಿತ್ತು.

---

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ನಿಷೇಧಿಸುವ ಸಾಧ್ಯತೆ ಬಗ್ಗೆ ಕನ್ನಡಪ್ರಭ ನ.5ಕ್ಕೆ ವರದಿ ಮಾಡಿತ್ತು.



ರಾಜ್ಯದಲ್ಲೂ ದೀಪಾವಳಿ ಹಬ್ಬಕ್ಕೆ ಪಟಾಕಿ ನಿಷೇಧ?

ಪಟಾಕಿ ನಿಷೇಧ, ಸಾಧ್ಯವೇ? ಕರ್ನಾಟಕ ಸೇರಿ 18 ರಾಜ್ಯಗಳಿಗೆ